ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ತೃತೀಯ ಲಿಂಗಿಗಳ ಜನಗಣತಿ ಕುರಿತು

ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

665 (775) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ತೃತೀಯ ಲಿಂಗಿಗಳ ಗಣತಿಯನ್ನು ನಡೆಸಲಾಗಿದೆಯೇ; (ಮಾಹಿತಿ ನೀಡುವುದು)

(ಆ) ತೃತೀಯ ಲಿಂಗಿಗಳಿಗೆ ಸಮಾಜದಲ್ಲಿ ಆಗುತ್ತಿರುವ ಕಿರುಕುಳ, ಶೋಷಣೆ, ದೌರ್ಜನ್ಯದ ವಿರುದ್ಧ ರಕ್ಷಣೆಗೆ ಸರ್ಕಾರ ತೆಗೆದುಕೊಂಡಿರುವ ಕ್ರಮದ ಮಾಹಿತಿ ಒದಗಿಸುವುದು;

(ಇ) ತೃತೀಯ ಲಿಂಗಿಗಳು ಲಿಂಗತ್ವ ದೃಢೀಕರಣ ಪ್ರಮಾಣ ಪತ್ರ ಪಡೆದುಕೊಳ್ಳಲು ದಂಡಾಧಿಕಾರಿಗಳ/ಮ್ಯಾಜಿಸ್ಟ್ರೇಟ್ ಎದುರು ವಸ್ತ್ರ ಕಳಚಿ ತಪಾಸಣೆಗೊಳಪಡಬೇಕು ಎಂಬ ನಿಯಮ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ತೃತೀಯ ಲಿಂಗಿಗಳಿಗೆ ಸಮಾನ ನಾಗರೀಕತೆ ಒದಗಿಸಲು ಸಾಮಾಜಿಕ ಘನತೆ ಮತ್ತು ಸಮಾನತೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಉ) ತೃತೀಯ ಲಿಂಗಿಗಳಿಗೆ ಉದ್ಯೋಗ, ಸಾಮಾಜಿಕ ಭದ್ರತೆಗಾಗಿ ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ ಯಾವುದಾದರೂ ನೀತಿ, ನಿಯಮಾವಳಿಗಳನ್ನು ರೂಪಿಸಿದೆಯೇ? (ಮಾಹಿತಿ ಒದಗಿಸುವುದು)